# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : 2016–17ನೇ ಶೈಕ್ಷಣಿಕ ಸಾಲಿಗೆ ಸರ್ಕಾರಿ ಶಾಲೆಗಳಲ್ಲಿ 1 ರಿಂದ 10ನೇ ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ ಉಚಿತವಾಗಿ ಶೂ ಮತ್ತು ಸಾಕ್ಸ್ ವಿತರಿಸುವ ಬಗ್ಗೆ.

ಓದಲಾಗಿದೆ : 1. 2015–16ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 131.

2. ನಿರ್ದೇಶಕರು (ಪ್ರಾಥಮಿಕ ಶಿಕ್ಷಣ), ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು. ಇವರ ಪತ್ರ ಸಂಖ್ಯೆ: ಸಿ.ಪಿ.ಇ.(2)/ಪಾದರಕ್ಷೆ–22/2014–15, ದಿನಾಂಕ: 21.10.2015.

*****

**ಪ್ರಸ್ತಾವನೆ:**

1. ಮೇಲೆ ಓದಲಾದ ಕ್ರಮಾಂಕ (1) ರ 2015–16ನೇ ಸಾಲಿನ ಆಯವ್ಯಯ ಭಾಷಣದಲ್ಲಿ, ಸರ್ಕಾರಿ ಶಾಲೆಗಳಲ್ಲಿ 1 ರಿಂದ 10ನೇ ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಒಂದು ಜೊತೆ ಶೂ ಮತ್ತು ಎರಡು ಜೊತೆ ಕಾಲುಚೀಲಗಳನ್ನು ವಿತರಿಸುವುದಾಗಿ ಘೋಷಿಸಲಾಗಿದೆ. ಶಿಕ್ಷಣ ಇಲಾಖೆಯ ವತಿಯಿಂದ ನಡೆಸಲ್ಪಡುತ್ತಿರುವ ಶಾಲೆಗಳಲ್ಲಿ ಸುಮಾರು 48 ಲಕ್ಷ ವಿದ್ಯಾರ್ಥಿಗಳಿರುತ್ತಾರೆ. ಈ ಉದ್ದೇಶಕ್ಕಾಗಿ ಆಯವ್ಯಯದಲ್ಲಿ ರೂ.120 ಕೋಟಿ ಒದಗಿಸಲಾಗಿದೆ.

2. ರಾಜ್ಯ ಸರ್ಕಾರದಿಂದ ಸಮವಸ್ತ್ರಗಳು, ಪಠ್ಯ ಪುಸ್ತಕಗಳು, ಬೈಸಿಕಲ್‌ಗಳು (8ನೇ ತರಗತಿಗೆ ಮಾತ್ರ), ಶಾಲಾ ಬ್ಯಾಗ್ (1, 3, 5 ಮತ್ತು 7ನೇ ತರಗತಿಗಳಲ್ಲಿನ ಪರಿಶಿಷ್ಟ ಜಾತಿ/ಪಂಗಡದ ವಿದ್ಯಾರ್ಥಿಗಳಿಗೆ) ಹಾಗೂ ನೋಟ್ ಪುಸ್ತಕಗಳನ್ನು (4 ರಿಂದ 10ನೇ ತರಗತಿಗಳಲ್ಲಿನ ಪರಿಶಿಷ್ಟ ಜಾತಿ/ಪಂಗಡದ ವಿದ್ಯಾರ್ಥಿಗಳಿಗೆ) ವಿತರಿಸಲಾಗುತ್ತಿದೆ. ಇದರೊಂದಿಗೆ, ವಿದ್ಯಾರ್ಥಿಗಳಿಗೆ ಮಧ್ಯಾಹ್ನ ಉಪಹಾರ ಮತ್ತು ಹಾಲನ್ನು ಒದಗಿಸುತ್ತಿದೆ. ಈ ಯೋಜನೆಗಳ ಜೊತೆಗೆ, ಹೆಚ್ಚುವರಿಯಾಗಿ ಶಾಲಾ ಮಕ್ಕಳ ಆರೋಗ್ಯ, ದೈಹಿಕ ರಕ್ಷಣೆಗಾಗಿ ಮತ್ತು ಏಕತೆಯನ್ನು ಮೂಡಿಸಿ, ಶಾಲೆಗಳಿಗೆ ನಿರಂತರವಾಗಿ ಹಾಜರಾಗುವಂತೆ ಪ್ರೇರೇಪಿಸಲು ಪ್ರಾರಂಭಿಕವಾಗಿ ಪ್ರಸ್ತಾಪಿತ ಶೂ ಮತ್ತು ಕಾಲು ಚೀಲ ವಿತರಣಾ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ನಿರ್ಧರಿಸಲಾಗಿದೆ.

3. ಮೇಲೆ ಓದಲಾದ ಕ್ರಮಾಂಕ (2)ರ ಪತ್ರದಲ್ಲಿ ಪ್ರಾಥಮಿಕ ಶಿಕ್ಷಣ ನಿರ್ದೇಶಕರು, ರಾಜ್ಯದಲ್ಲಿನ ಸರ್ಕಾರಿ ಶಾಲಾ ಮಕ್ಕಳಿಗೆ ಉಚಿತ ಶೂ ಮತ್ತು ಸಾಕ್ಸ್ ವಿತರಣೆ ಕಾರ್ಯಕ್ರಮದ ಅನುಷ್ಠಾನಕ್ಕೆ ಸಂಬಂಧಿಸಿದಂತೆ, ರಾಜ್ಯದಲ್ಲಿನ ಶಿಕ್ಷಣ ಇಲಾಖೆಯ ವತಿಯಿಂದ ನಡೆಸಲ್ಪಡುತ್ತಿರುವ ಸರ್ಕಾರಿ ಶಾಲೆಗಳಲ್ಲಿ 1 ರಿಂದ 10ನೇ ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ ಉಚಿತವಾಗಿ ಶೂ ಮತ್ತು ಸಾಕ್ಸ್ ವಿತರಿಸುವ ಬಗ್ಗೆ ಆದೇಶ ನೀಡಲು ಕೋರಿದ್ದಾರೆ.

4. ಶೂ ಮತ್ತು ಕಾಲುಚೀಲ ವಿತರಣಾ ಯೋಜನೆಯನ್ನು, ರಾಜ್ಯದಲ್ಲಿನ ವಿವಿಧ ಭಾಗಗಳಲ್ಲಿ ಅನುಷ್ಠಾನಗೊಳಿಸುವ ಬಗ್ಗೆ ಕೆಲವು ನಮ್ಯತೆಗೆ ಅವಕಾಶ ನೀಡುವ ಅಗತ್ಯತೆಯಿದೆ. ಮಲೆನಾಡು ಮತ್ತು ಕರ್ನಾಟಕ ಕರಾವಳಿ ಪ್ರದೇಶದಲ್ಲಿ ವರ್ಷದಲ್ಲಿ ಮೂರರಿಂದ ನಾಲ್ಕು ತಿಂಗಳುಗಳಲ್ಲಿ ಅತಿ ಹೆಚ್ಚಿನ ಮಳೆ ಬೀಳುವುದರಿಂದ ವಿದ್ಯಾರ್ಥಿಗಳಿಗೆ ಷೂಗಳು ಸಮರ್ಪಕ ಪಾದರಕ್ಷೆ ಆಗಲಿಕ್ಕಿಲ್ಲ. ಅದೇ ರೀತಿ ಉತ್ತರ ಕರ್ನಾಟಕದ ಭಾಗದಲ್ಲಿ ಅತಿ ಹೆಚ್ಚಿನ ಉಷ್ಣಾಂಶದ ವಾತಾವರಣ ಇರುವುದರಿಂದ ಶೂ ಸೂಕ್ತ ಪಾದರಕ್ಷೆ ಎನಿಸುವುದಿಲ್ಲ. ವಾತಾವರಣದ ಸ್ಥಿತಿಗಳು ಮತ್ತು ಹಾಕಿಕೊಳ್ಳಲು ಹಾಗೂ ತೆಗೆಯಲು ಸುಲಭವಾಗುವ ದೃಷ್ಟಿಯಿಂದ, ಇಂತಹ ಭಾಗದಲ್ಲಿನ ವಿದ್ಯಾರ್ಥಿಗಳು ಶೂಗಳ ಬದಲಾಗಿ ಸ್ಯಾಂಡಲ್‌ಗಳನ್ನು ಧರಿಸಲು ಬಯಸುವುದನ್ನು ಗಮನಿಸಿದೆ. ಈ ನಮ್ಯತೆ ಬಗ್ಗೆ ತೀರ್ಮಾನ ತೆಗೆದುಕೊಳ್ಳಲು ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಯ ತೀರ್ಮಾನಕ್ಕೆ ಬಿಡಲು ನಿರ್ಧರಿಸಲಾಗಿದೆ.

....2

ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಇಡಿ 67 ಯೋಯೋಕ 2015,**
**ಬೆಂಗಳೂರು, ದಿನಾಂಕ:05/01/2016**

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2016-17ನೇ ಶೈಕ್ಷಣಿಕ ಸಾಲಿಗೆ ರಾಜ್ಯದಲ್ಲಿನ ಶಿಕ್ಷಣ ಇಲಾಖೆಯ ವತಿಯಿಂದ ನಡೆಸಲ್ಪಡುತ್ತಿರುವ ಸರ್ಕಾರಿ ಶಾಲೆಗಳಲ್ಲಿ 1 ರಿಂದ 10ನೇ ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ ಉಚಿತವಾಗಿ ಒಂದು ಜೊತೆ ಶೂ ಮತ್ತು ಎರಡು ಜೊತೆ ಸಾಕ್ಸ್‌ಗಳನ್ನು, ಈ ಕೆಳಕಂಡ ಷರತ್ತುಗಳ ಆಧಾರ ವಿತರಿಸುವ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು. ಇವರಿಗೆ ಅನುಮತಿ ನೀಡಿದೆ.

**ಷರತ್ತುಗಳು:-**

1. ಅರ್ಹ ವಿದ್ಯಾರ್ಥಿಗಳ ಪಾದರಕ್ಷೆಗಳ ಅಳತೆ ದಾಖಲಿಸಿ, ಉತ್ತಮ ಗುಣಮಟ್ಟದ ಪಾದರಕ್ಷೆಯನ್ನು ಸ್ಥಳೀಯವಾಗಿ ಖರೀದಿಸಿ, ವಿತರಣೆ ಮಾಡುವ ಜವಾಬ್ದಾರಿಯನ್ನು ಸಂಬಂಧಿಸಿದ ಶಾಲೆಯ ಶಾಲಾಭಿವೃದ್ಧಿ ಹಾಗೂ ಮೇಲುಸ್ತುವಾರಿ ಸಮಿತಿ (ಎಸ್.ಡಿ.ಎಂ.ಸಿ)ಗೆ ವಹಿಸುವುದು.

2. ಒಂದು ಜೊತೆ ಕಪ್ಪು ಬಣ್ಣದ ಶೂ ಗಳನ್ನು ಹಾಗೂ ಎರಡು ಜೊತೆ ಬಿಳಿ ಬಣ್ಣದ ಕಾಲು ಚೀಲಗಳನ್ನು ಖರೀದಿಸಿ ವಿತರಿಸುವುದು. ಪ್ರಸ್ತಾವನೆಯ ಕಂಡಿಕೆ (4) ರಲ್ಲಿ ವಿವರಿಸಿರುವಂತೆ, ವಾತಾವರಣದ ಸ್ಥಿತಿಗಳು ಮತ್ತು ಹಾಕಿಕೊಳ್ಳಲು ಹಾಗೂ ತೆಗೆಯಲು ಸುಲಭವಾಗುವಂತೆ ವಿದ್ಯಾರ್ಥಿಗಳು ಇಚ್ಛಿಸಿದಲ್ಲಿ, ಸ್ಥಳೀಯ ವಾತಾವರಣವನ್ನು ಗಮನಿಸಿ ಎಸ್.ಡಿ.ಎಂ.ಸಿ.ಗಳು ಸ್ಥಳೀಯ ಅಗತ್ಯತೆಯನ್ನು ಪರಿಗಣಿಸಿ, ಶೂ ಮತ್ತು ಕಾಲು ಚೀಲಗಳ ಬದಲಾಗಿ ಸ್ಯಾಂಡಲ್ಸ್‌ಗಳನ್ನು ಖರೀದಿಸಿ ವಿತರಿಸಬಹುದಾಗಿದೆ.

3. ಶೂಗಳ ಮೇಲ್ಪದರು ಪಾಲಿ ಯೂರೇಥಿನ್ [ಪಿ.ಯು] ಕೋಟೆಡ್ ಫ್ಯಾಬ್ರಿಕ್ ಮತ್ತು ಪಾಲಿವಿನೈಲ್ ಕ್ಲೋರೈಡ್ [ಪಿ.ವಿ.ಸಿ] ಅಥವಾ ಪಾಲಿ ಯೂರೇಥಿನ್ [ಪಿ.ಯು] ಸೋಲ್ ಹೊಂದಿದ ಹಾಗೂ ಪಾದರಕ್ಷಣೆಯ ಒಳಪದರು (Insock) ಬಟ್ಟೆ/ಫ್ಯಾಬ್ರಿಕ್‌ಯಿಂದ ಕೂಡಿರುವ ಶೂಗಳನ್ನು ಖರೀದಿಸುವುದು. ಎಸ್.ಡಿ.ಎಂ.ಸಿ.ಗಳು ಸ್ಯಾಂಡಲ್ಸ್‌ಗಳನ್ನು ಖರೀದಿಸಲು ಪರಿಗಣಿಸಿದ ವೆಲ್‌ಕ್ರೋ ಸ್ಯಾಂಡಲ್ಸ್‌ಗಳನ್ನು (Velcro Sandals) ಖರೀದಿಸಿ ವಿತರಿಸುವುದು.

4. ಶೂ ಮತ್ತು ಸಾಕ್ಸ್‌ಗಳ ಖರೀದಿ ಪ್ರಕ್ರಿಯೆ ಪ್ರಾರಂಭಿಸುವ ಮುನ್ನ ಎಸ್.ಡಿ.ಎಂ.ಸಿ.ಯು ಒಂದು ಅನುಮೋದಿತ ಸಮಿತಿಯನ್ನು ರಚಿಸಿ, ಖರೀದಿ ಪ್ರಕ್ರಿಯೆ ಪ್ರಾರಂಭಿಸುವುದು.

**ಪಾದರಕ್ಷೆ ಖರೀದಿ ಸಮಿತಿ:-**

| | | |
|---|---|---|
| I. ಎಸ್.ಡಿ.ಎಂ.ಸಿ. ಅಧ್ಯಕ್ಷರು | - | ಸಮಿತಿಯ ಅಧ್ಯಕ್ಷರು. |
| II. ಸಂಬಂಧಿಸಿದ ಶಾಲಾ ಮುಖ್ಯೋಪಾಧ್ಯಾಯರು | - | ಸದಸ್ಯ ಕಾರ್ಯದರ್ಶಿ. |
| III. ಎಸ್.ಡಿ.ಎಂ.ಸಿ. ನಾಮನಿರ್ದೇಶಿತ ಮೂವರು ಸದಸ್ಯರು (ಇಬ್ಬರು ಮಹಿಳಾ ಸದಸ್ಯರು ಕಡ್ಡಾಯವಾಗಿ ಇರುವುದು) | - | ಸದಸ್ಯರು. |

5. ಪಾದರಕ್ಷೆಗಳನ್ನು ವಿದ್ಯಾರ್ಥಿಗಳ ಹಾಜರಾತಿಯನ್ನು ಗಮನಿಸಿ, ಅದಕ್ಕೆ ತಕ್ಕಂತೆ ಖರೀದಿಸುವುದು.

......3

6. ಈ ಯೋಜನೆಯ ಅನುಷ್ಠಾನಕ್ಕೆ ಈ ಕೆಳಕಂಡ ಪ್ರಮಾಣದಲ್ಲಿ ಅನುದಾನಗಳನ್ನು ಎಸ್.ಡಿ.ಎಂ.ಸಿ.ಗಳಿಗೆ ಬಿಡುಗಡೆ ಮಾಡುವುದು.

| | | |
|---|---|---|
| ಅ) 1 ರಿಂದ 5ನೇ ತರಗತಿ ವಿದ್ಯಾರ್ಥಿಗಳಿಗೆ | : | ತಲಾ ರೂ. 225-00 |
| ಆ) 6 ರಿಂದ 8ನೇ ತರಗತಿ ವಿದ್ಯಾರ್ಥಿಗಳಿಗೆ | : | ತಲಾ ರೂ. 250-00 |
| ಇ) 9 ರಿಂದ 10ನೇ ತರಗತಿ ವಿದ್ಯಾರ್ಥಿಗಳಿಗೆ | : | ತಲಾ ರೂ. 275-00 |

ಸೇವಾ ದೃಷ್ಟಿಯಿಂದ ದಾನಿಗಳು, ಖಾಸಗಿ ಸಂಸ್ಥೆಗಳು ಈ ಉದ್ದೇಶಕ್ಕಾಗಿ ಹೆಚ್ಚುವರಿ ಹಣ ನೀಡಿದಲ್ಲಿ, ಇದನ್ನೂ ಬಳಸಿಕೊಂಡು ಇನ್ನೂ ಉತ್ತಮ ಗುಣಮಟ್ಟದ ಶೂ ಮತ್ತು ಸಾಕ್ಸ್‌ಗಳನ್ನು ಖರೀದಿಸಿ ವಿತರಿಬಹುದು.

7. ಈ ಕಾರ್ಯಕ್ರಮಕ್ಕೆ 2015-16ನೇ ಸಾಲಿನ ಆಯವ್ಯಯ ಯೋಜನಾ ಲೆಕ್ಕಶೀರ್ಷಿಕೆ:2202-01-109-0-03-221 ರಿಂದ ರೂ.5659.00 ಲಕ್ಷಗಳನ್ನು, ಉಪಶೀರ್ಷಿಕೆ 422 ರಿಂದ ರೂ.3958.00 ಲಕ್ಷಗಳನ್ನು ಹಾಗೂ ಉಪಶೀರ್ಷಿಕೆ 423 ರಿಂದ ರೂ.1683.00 ಲಕ್ಷಗಳನ್ನು NEFT ಮೂಲಕ ಎಸ್.ಡಿ.ಎಂ.ಸಿ. ಗಳಿಗೆ ಬಿಡುಗಡೆ ಮಾಡುವುದು.

8. ನಿಯಮಾನುಸಾರ ಖರೀದಿ ಪ್ರಕ್ರಿಯೆಯನ್ನು ಎರಡು ತಿಂಗಳ ಒಳಗಾಗಿ ಪೂರ್ಣಗೊಳಿಸಿ, ಸರಬರಾಜು ಪೂರ್ಣಗೊಂಡ ಖರೀದಿ ಬಳಕೆ ಪ್ರಮಾಣ ಪತ್ರವನ್ನು ಮತ್ತು ಖರೀದಿ ಸ್ವೀಕೃತಿಗಳನ್ನು ಸಂಬಂಧಿತ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಒದಗಿಸುವುದು ಮತ್ತು ಈ ವೆಚ್ಚಗಳನ್ನು ಆಡಿಟ್‌ಗೆ ಒಳಪಡಿಸುವುದು.

9. ಸಂಬಂಧಿತ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಉಪ ನಿರ್ದೇಶಕರುಗಳು ಕಾರ್ಯಕ್ರಮ ಅನುಷ್ಠಾನದ ಮೇಲುಸ್ತುವಾರಿ ನೋಡಿಕೊಳ್ಳುವುದು, ಗುಣಮಟ್ಟದ ಶೂ ಮತ್ತು ಕಾಲುಚೀಲ [ಅಥವಾ ಸ್ಯಾಂಡಲ್] ಗಳನ್ನು ಖರೀದಿಸಿರುವುದನ್ನು ಖಚಿತ ಪಡಿಸಿಕೊಳ್ಳುವುದು ಹಾಗೂ ಈ ಪೂರ್ಣ ಪ್ರಕ್ರಿಯೆ ದಿನಾಂಕ:15-03-2016 ರೊಳಗೆ ಪೂರ್ಣಗೊಳಿಸುವುದನ್ನು ದೃಢಪಡಿಸಿಕೊಳ್ಳುವುದು. ಆಯಾ ತಾಲ್ಲೂಕು ಮತ್ತು ಜಿಲ್ಲೆಯ ಶಾಲಾವಾರು ಬಳಕೆ ಪ್ರಮಾಣ ಪತ್ರಗಳನ್ನು, ಪೂರ್ಣ ಕ್ರೋಢೀಕೃತ ವರದಿಯೊಂದಿಗೆ ದಿನಾಂಕ:31-03-2016 ರೊಳಗೆ ಆಯುಕ್ತರಿಗೆ ಸಲ್ಲಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 1118 ವೆಚ್ಚ-8/2015 ದಿನಾಂಕ:04.01.2016 ರಲ್ಲಿ ನೀಡಿರುವ ಸಹಮತಿ ಅನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಐ.ಎಫ್.ಮಾಗಿ)
ವಿಶೇಷಾಧಿಕಾರಿ ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ
ಶಿಕ್ಷಣ ಇಲಾಖೆ (ಯೋಜನೆ)

05/1/16

ಇವರಿಗೆ:

1. ಮಹಾಲೇಖಪಾಲರು, (ಅಡಿಟ್ 1 & 2) ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
3. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ ಮತ್ತು ಗುಲಬರ್ಗಾ.
4. ನಿರ್ದೇಶಕರು, (ಪ್ರಾಥಮಿಕ) & (ಪ್ರೌಢ ಶಿಕ್ಷಣ) ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗ
5. ನಿರ್ದೇಶಕರು, ಖಜಾನಾ ಇಲಾಖೆ, ವಿಶ್ವೇಶ್ವರಯ್ಯ ಮುಖ್ಯ ಗೋಪುರ, ಬೆಂಗಳೂರು.
6. ಉಪನಿರ್ದೇಶಕರು, ಖಜಾನಾ ಗಣಕ ಕೇಂದ್ರ, ನಂ.49, ಖನಿಜ ಭವನ, ರೇಸ್ ಕೋರ್ಸ್‌ರಸ್ತೆ, ಬೆಂಗಳೂರು.

7. ಲೆಕ್ಕಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
8. ಸರ್ಕಾರದ ಉಪಕಾರ್ಯದರ್ಶಿ-2, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
9. ಕೋ. ಆರ್ಡಿನೇಟರ್, ಮಾಹಿತಿ ಕೇಂದ್ರ, ಶಿಕ್ಷಣ ಇಲಾಖೆ, ಬೆಂಗಳೂರು.
10. ಸಾಪ್ತಾಹಿಕ ರಾಜ್ಯ ಪತ್ರ/ಶಾಖಾರಕ್ಷ ಕಡತ/ಹೆಚ್ಚುವರಿ ಪ್ರತಿಗಳು.
11. ಎಲ್ಲಾ ಎಸ್.ಡಿ.ಎಂ.ಸಿ.ಗಳಿಗೆ ಆಯುಕ್ತರ ಮುಖಾಂತರ.

<u>ಪ್ರತಿ ಮಾಹಿತಿಗಾಗಿ;</u>

1. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ) ಬಹುಮಹಡಿ ಕಟ್ಟಡ, ಬೆಂಗಳೂರು.
3. ಸರ್ಕಾರದ ಉಪಕಾರ್ಯದರ್ಶಿ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರ ಆಪ್ತ ಸಹಾಯಕ, ಶಿಕ್ಷಣ ಇಲಾಖೆ, ಬೆಂಗಳೂರು.